**All India Radio: Bangalore**
**National Bulletin In Kannada**
**12.05.2026  13.10 hrs**

**<>><><*><><<>**

ಮುಖ್ಯಾಂಶಗಳು

೧.  ಅಸ್ಸಾಂ ಮುಖ್ಯಮಂತ್ರಿಯಾಗಿ ಸತತ ೨ನೇ ಬಾರಿ ಹಿಮಂತ್ ಬಿಸ್ವಾ ಸರ್ಮಾ ಪ್ರಮಾಣವಚನ ಸ್ವೀಕಾರ

೨.  ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಹದಿನೈದು ದಾದಿಯರಿಗೆ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ಪ್ರದಾನ

೩.  ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯಿಂದ ನೀಟ್ ಯುಜಿ-೨೦೨೬ ಪರೀಕ್ಷೆ ರದ್ದು ; ಸಿಬಿಐ ತನಿಖೆಗೆ ವಹಿಸಲು ಕೇಂದ್ರ ಸರ್ಕಾರ ನಿರ್ಧಾರ

೪.  ನ್ಯಾಯಾಂಗ ಮೂಲಸೌಕರ್ಯ ಪರಾಮರ್ಶೆಗೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರಿಂದ ಸಮಿತಿ ರಚನೆ

೫.  ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಗುಜರಾತ್ ಟೈಟನ್ಸ್-ಸನ್ ರೈಸರ್ಸ್ ಹೈದರಾಬಾದ್ ಮುಖಾಮುಖಿ

**<>><><*><><<>**

ಬಿಜೆಪಿ ನಾಯಕ ಹಿಮಂತ ಬಿಸ್ವಾ ಸರ್ಮಾ ಅವರು ಇಂದು ಅಸ್ಸಾಂನ ಮುಖ್ಯಮಂತ್ರಿಯಾಗಿ ಸತತ ಎರಡನೇ ಬಾರಿಗೆ ಅಧಿಕಾರ ಸ್ವೀಕರಿಸಿದ್ದಾರೆ. ಅವರೊಂದಿಗೆ ಮೈತ್ರಿಕೂಟದ ವಿವಿಧ ಪಕ್ಷಗಳ ನಾಲ್ವರು ಸಚಿವರು ಕೂಡ ಪ್ರಮಾಣವಚನ ಸ್ವೀಕರಿಸಿದರು. ಅಸ್ಸಾಂ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕಾಂಗ್ರೆಸ್ಸೇತರ ಮುಖ್ಯಮಂತ್ರಿಯೊಬ್ಬರು ಸತತ ಎರಡನೇ ಅವಧಿಗೆ ಆಯ್ಕೆಯಾಗಿದ್ದಾರೆ. ಹಿಮಂತ ಬಿಸ್ವಾ ಸರ್ಮಾ ಅವರೊಂದಿಗೆ ಬಿಜೆಪಿಯ ರಾಮೇಶ್ವರ್ ತೇಲಿ, ಅಜಂತಾ ನಿಯೋಗ್, ಅಸೋಮ್ ಗಣ ಪರಿಷತ್‌ನ ಅತುಲ್ ಬೋರಾ ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್‌ನ ಚರಣ್ ಬೋರೋ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಗುವಾಹಟಿಯ ಖಾನಾಪಾರ ಪಶುವೈದ್ಯಕೀಯ ಕಾಲೇಜು ಮೈದಾನದಲ್ಲಿ ನಡೆದ ಈ ಸಮಾರಂಭದಲ್ಲಿ ರಾಜ್ಯಪಾಲ ಲಕ್ಷ್ಮಣ್ ಪ್ರಸಾದ್ ಆಚಾರ್ಯ, ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು. ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಸಚಿವರು ಸೇರಿದಂತೆ ಎನ್‌ಡಿಎ ಆಡಳಿತವಿರುವ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಿದ್ದರು.

**<>><><*><><<>**

ಪಶ್ಚಿಮ ಬಂಗಾಳದ ನೂತನ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರ ನೇತೃತ್ವದಲ್ಲಿ ನಡೆದ ಮೊದಲ ಸಚಿವ ಸಂಪುಟ ಸಭೆ ನಿರ್ಧಾರಗಳನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಪಶ್ಚಿಮ ಬಂಗಾಳದ ಜನರ ಕಲ್ಯಾಣವೇ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿರುವ ಅವರು, ವಿಶ್ವದ ಅತಿದೊಡ್ಡ ಆರೋಗ್ಯ ಯೋಜನೆಯಾದ ಆಯುಷ್ಮಾನ್ ಭಾರತ್ ಇನ್ನು ಮುಂದೆ ಪಶ್ಚಿಮ ಬಂಗಾಳದ

ಜನರಿಗೂ ಲಭ್ಯವಾಗುತ್ತಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ. ಈ ಯೋಜನೆ ಉತ್ತಮ ಗುಣಮಟ್ಟದ ಮತ್ತು ಕೈಗೆಟಕುವ ದರದ ಆರೋಗ್ಯ ಸೇವೆಯನ್ನು ಖಚಿತಪಡಿಸಲಿದೆ ಎಂದರು.

<><><*><><>

ಅಂತಾರಾಷ್ಟ್ರೀಯ ದಾದಿಯರ ದಿನವಾದ ಇಂದು ರಾಷ್ಟ್ರಪತಿ ಭವನದಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ೧೫ ದಾದಿಯರಿಗೆ ೨೦೨೬ನೇ ಸಾಲಿನ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು. ಶುಶ್ರೂಷೆಯ ಕ್ಷೇತ್ರದಲ್ಲಿ ಅಸಾಧಾರಣ ಕೊಡುಗೆ ನೀಡಿದ್ದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಾಗೂ ಕೇಂದ್ರಾಡಳಿತ ಪ್ರದೇಶ ಮತ್ತು ಸ್ವಯಂ ಸೇವಾ ಸಂಸ್ಥೆಗಳ ನೋಂದಾಯಿತ ನರ್ಸ್‌ಗಳು, ದಾದಿಯರು ಹಾಗೂ ಮಹಿಳಾ ಆರೋಗ್ಯ ಸಂದರ್ಶಕರಿಗೆ ಈ ಪ್ರತಿಷ್ಠಿತ ಗೌರವವನ್ನು ನೀಡಲಾಗಿದೆ. ಈ ಪ್ರಶಸ್ತಿ ಒಂದು ಪ್ರಮಾಣಪತ್ರ, ಒಂದು ಲಕ್ಷ ರೂಪಾಯಿ ನಗದು ಬಹುಮಾನ ಹಾಗೂ ಪದಕವನ್ನು ಒಳಗೊಂಡಿದೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ, ಆರೋಗ್ಯ ಖಾತೆ ರಾಜ್ಯ ಸಚಿವ ಪ್ರತಾಪ್ ರಾವ್ ಜಾಧವ್ ಮತ್ತು ಇತರ ಹಿರಿಯ ಅಧಿಕಾರಿಗಳು ಈ ವೇಳೆ ಉಪಸ್ಥಿತರಿದ್ದರು. ದಾದಿಯರು ಸಮಾಜಕ್ಕೆ ಸಲ್ಲಿಸುವ ಶ್ಲಾಘನೀಯ ಸೇವೆಯನ್ನು ಗುರುತಿಸಲು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ೧೯೭೩ರಲ್ಲಿ ಈ ಪ್ರಶಸ್ತಿಯನ್ನು ಸ್ಥಾಪಿಸಿದೆ. ದಾದಿಯರ ಸಮರ್ಪಣಾ ಮನೋಭಾವ ಮತ್ತು ರಾಷ್ಟ್ರಕ್ಕೆ ಅವರು ನೀಡುತ್ತಿರುವ ಅಮೂಲ್ಯ ಸೇವೆಯ ಸಂಕೇತವಾಗಿ ಈ ಪ್ರಶಸ್ತಿಯನ್ನು ನೀಡಲಾಗುತ್ತದೆ.

<><><*><><>

ಆಧುನಿಕ ಶುಶ್ರೂಷಾ ಶಾಸ್ತ್ರದ ಸ್ಥಾಪಕಿ ಫ್ಲೋರೆನ್ಸ್ ನೈಂಟಿಗೇಲ್ ಅವರ ಜನ್ಮದಿನದ ಸ್ಮರಣಾರ್ಥವಾಗಿ ಇಂದು ಅಂತಾರಾಷ್ಟ್ರೀಯ ದಾದಿಯರ ದಿನವನ್ನು ಆಚರಿಸಲಾಗುತ್ತಿದೆ. ನಮ್ಮ ದಾದಿಯರು ನಮ್ಮ ಭವಿಷ್ಯ ; ಸಶಕ್ತ ದಾದಿಯರು ಜೀವ ಉಳಿಸುತ್ತಾರೆ ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ. ಈ ದಿನ ಜಾಗತಿಕವಾಗಿ ಶುಶ್ರೂಷಾ ವೃತ್ತಿಪರತೆಗೆ ಉತ್ತಮ ಬೆಂಬಲ, ಸುರಕ್ಷತೆ ಮತ್ತು ಸಂಪನ್ಮೂಲಗಳ ಅಗತ್ಯತೆಯ ಮೇಲೆ ಹೆಚ್ಚಿನ ಗಮನ ನೀಡಲಾಗುತ್ತಿದೆ. ರೋಗಿಗಳ ಆರೈಕೆ, ಸಮುದಾಯದ ಆರೋಗ್ಯ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ದಾದಿಯರ ಪಾತ್ರ ಅತ್ಯಗತ್ಯವಾಗಿದೆ. ಈ ದಿನದ ಹಿನ್ನೆಲೆ ಕೇಂದ್ರ ಸಚಿವರಾದ ಅಮಿತ್ ಶಾ, ಜೆ.ಪಿ.ನಡ್ಡಾ ಸೇರಿದಂತೆ ಅನೇಕ ಗಣ್ಯರು ಸಂದೇಶ ಹಂಚಿಕೊಂಡಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಕೇಂದ್ರ ಸಚಿವ ಜೆ.ಪಿ.ನಡ್ಡಾ, ದಾದಿಯರ ಅಚಲ ಸಹಾನುಭೂತಿ, ಸದೃಢತೆ ಮತ್ತು ನಿಸ್ವಾರ್ಥ ಸಮರ್ಪಣಾ ಮನೋಭಾವವನ್ನು ಗೌರವಿಸಲಾಗುತ್ತಿದೆ. ದಾದಿಯರ ಯೋಗಕ್ಷೇಮಕ್ಕಾಗಿ ಹೂಡಿಕೆ ಮಾಡುವ ಮೂಲಕ ಜಗತ್ತು ಆರೋಗ್ಯಕರ ಸಮುದಾಯಗಳನ್ನು ಮತ್ತು ಸದೃಢ ಭವಿಷ್ಯ ನಿರ್ಮಿಸಲು ಸಾಧ್ಯ ಎಂದು ತಿಳಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರತಿಯೊಬ್ಬ ದಾದಿಯೂ ಸಂಕಷ್ಟದಲ್ಲಿರುವವರಿಗೆ ಭರವಸೆಯ ಆಧಾರಸ್ತಂಭವಾಗಿ ನಿಲ್ಲುತ್ತಾರೆ. ಅವರ ನಿಸ್ವಾರ್ಥ ಸೇವೆ ಮತ್ತು ಅಚಲ ಸಮರ್ಪಣಾಭಾವ ಆರೋಗ್ಯವಂತ ಭಾರತದ ನಿಜವಾದ ಅಡಿಪಾಯವಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><*><><>

ವೈದ್ಯಕೀಯ ಶಿಕ್ಷಣ ಪ್ರವೇಶಾತಿಗಾಗಿ ಈ ತಿಂಗಳ ೩ರಂದು ನಡೆದಿದ್ದ ನೀಟ್ ಯುಜಿ-೨೦೨೬ ಪರೀಕ್ಷೆಯನ್ನು ರದ್ದುಗೊಳಿಸಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ನಿರ್ಧರಿಸಿದೆ. ಪರೀಕ್ಷಾ ಪದ್ಧತಿಯ ಮೇಲಿನ ನಂಬಿಕೆ

ಮತ್ತು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪದ ಸಮಗ್ರ ತನಿಖೆಗಾಗಿ ಪ್ರಕರಣವನ್ನು ಕೇಂದ್ರೀಯ ತನಿಖಾ ದಳಕ್ಕೆ ವಹಿಸಲು ಸರ್ಕಾರ ತೀರ್ಮಾನಿಸಿದೆ. ವಿವಿಧ ತನಿಖಾ ಸಂಸ್ಥೆಗಳು ನೀಡಿದ ವರದಿಗಳನ್ನು ಎನ್‌ಟಿಎ, ಸಮನ್ವಯದೊಂದಿಗೆ ಪರಿಶೀಲಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದ್ದು, ಅಗತ್ಯವಿರುವ ಎಲ್ಲಾ ದಾಖಲೆ ಮತ್ತು ಸಹಕಾರವನ್ನು ನೀಡುವುದಾಗಿ ಸಂಸ್ಥೆ ತಿಳಿಸಿದೆ. ರದ್ದುಗೊಂಡಿರುವ ಪರೀಕ್ಷೆಯನ್ನು ಶೀಘ್ರದಲ್ಲೇ ಮರು ನಡೆಸಲಾಗುವುದು ಮತ್ತು ಅದರ ದಿನಾಂಕಗಳನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು ಎಂದು ತಿಳಿಸಿದರು.

**<><><*><><<>**

ಭಾರತದ ನ್ಯಾಯ ವಿತರಣಾ ವ್ಯವಸ್ಥೆಯನ್ನು ಬಲಪಡಿಸಲು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿ ಅರವಿಂದ್ ಕುಮಾರ್ ನೇತೃತ್ವದಲ್ಲಿ 'ನ್ಯಾಯಾಂಗ ಮೂಲಸೌಕರ್ಯ ಸಲಹಾ ಸಮಿತಿ'ಯನ್ನು ರಚಿಸಿದ್ದಾರೆ. ಈ ಸಮಿತಿಯು ದೇಶಾದ್ಯಂತದ ನ್ಯಾಯಾಲಯಗಳ ಅಗತ್ಯಗಳನ್ನು ಮೌಲ್ಯಮಾಪನ ಮಾಡಲಿದ್ದು, ಈ ಕ್ಷೇತ್ರಕ್ಕಾಗಿ ಸುಮಾರು ೪೦ ಸಾವಿರದಿಂದ ೫೦ ಸಾವಿರ ಕೋಟಿ ರೂಪಾಯಿಗಳ ಸರ್ಕಾರಿ ಅನುದಾನಕ್ಕೆ ಶಿಫಾರಸು ಮಾಡುವ ನಿರೀಕ್ಷೆಯಿದೆ. ಸಮಿತಿಯು ನ್ಯಾಯಾಲಯಗಳ ಆಧುನೀಕರಣ, ಪ್ರಕರಣಗಳ ಶೀಘ್ರ ವಿಲೇವಾರಿಗೆ ತಂತ್ರಜ್ಞಾನದ ಬಳಕೆ ಮತ್ತು ಇ-ಕೋರ್ಟ್ಸ್ ಯೋಜನೆಯಡಿ ಡಿಜಿಟಲೀಕರಣಕ್ಕೆ ಹೆಚ್ಚಿನ ಒತ್ತು ನೀಡಲಿದೆ. ನ್ಯಾಯಮೂರ್ತಿಗಳಾದ ದೆಬಂಗ್ಸು ಬಸಾಕ್, ಅಶ್ವನಿ ಕುಮಾರ್ ಮಿಶ್ರಾ ಮತ್ತು ಸೋಮಶೇಖರ್ ಸುಂದರೇಶನ್ ಈ ಸಮಿತಿಯ ಸದಸ್ಯರಾಗಿದ್ದು, ಆಗಸ್ಟ್ ३೦ ರೊಳಗೆ ಮಧ್ಯಂತರ ವರದಿಯನ್ನು ಸಲ್ಲಿಸಲು ಸೂಚಿಸಲಾಗಿದೆ. ನ್ಯಾಯಾಲಯಗಳಲ್ಲಿನ ಮೂಲಸೌಕರ್ಯ ಕೊರತೆಗಳನ್ನು ನೀಗಿಸುವುದು ಮತ್ತು ಡಿಜಿಟಲ್ ಮೂಲಸೌಕರ್ಯವನ್ನು ಹೈಕೋರ್ಟ್ ಹಾಗೂ ಕೆಳಹಂತದ ನ್ಯಾಯಾಲಯಗಳಿಗೆ ಸಮಾನವಾಗಿ ವಿಸ್ತರಿಸುವುದು ಈ ಸಮಿತಿಯ ಪ್ರಮುಖ ಗುರಿಯಾಗಿದೆ. ನ್ಯಾಯಾಂಗ ವ್ಯವಸ್ಥೆಯನ್ನು ಕಾಗದರಹಿತ ಮತ್ತು ದಕ್ಷವನ್ನಾಗಿ ಮಾಡಲು ಕೇಂದ್ರ ಸರ್ಕಾರವು ಈಗಾಗಲೇ ಇ-ಕೋರ್ಟ್ಸ್ ಯೋಜನೆಯ ३ನೇ ಹಂತಕ್ಕೆ ೭ ಸಾವಿರದ ೨೧೦ ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ.

**<><><*><><<>**

ನ್ಯೂಯಾರ್ಕ್‌ನಲ್ಲಿರುವ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಭಾರತದ ಗಣಿತ ಶಾಸ್ತ್ರದ ಕೊಡುಗೆಗಳ ಕುರಿತಾದ ಪ್ರದರ್ಶನವನ್ನು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮೂರನೇ ಶತಮಾನದಲ್ಲಿ ಭಾರತದಲ್ಲಿ ಅಭಿವೃದ್ಧಿಪಡಿಸಲಾದ ಬೈನರಿ ವ್ಯವಸ್ಥೆ, ಡಿಜಿಟಲ್ ಯುಗ ಮತ್ತು ಕೃತಕಬುದ್ಧಿಮತ್ತೆ ಪಯಣಕ್ಕೆ ಅಡಿಪಾಯವಾಗಿದೆ. ಗತಕಾಲದ ಇತಿಹಾಸದ ವಿರೂಪಗಳನ್ನು ಸರಿಪಡಿಸುವ ಮೂಲಕ ಮಾತ್ರ ಭವಿಷ್ಯದ ಸಮಸ್ಯೆಗಳನ್ನು ನಿಖರವಾಗಿ ಎದುರಿಸಲು ಸಾಧ್ಯ ಎಂದು ತಿಳಿಸಿದರು. ಭಾರತ ಅಂತಾರಾಷ್ಟ್ರೀಯ ಕೇಂದ್ರದ ಸಂಹಿತ ಕಾರ್ಯಕ್ರಮದಡಿ ರೂಪಿಸಲಾದ ಈ ಗಣಿತದ ಜಾಗತಿಕ ಪ್ರಸರಣ ಎಂಬ ಪ್ರದರ್ಶನ ವೈದ್ಯಕೀಯ, ವಾಸ್ತುಶಿಲ್ಪ, ತತ್ವಶಾಸ್ತ್ರ ಮತ್ತು ಸಾಹಿತ್ಯ ಸೇರಿದಂತೆ ದೇಶದ ಪ್ರಾಚೀನ ಗಣಿತದ ಸಾಧನೆಯನ್ನು ಡಿಜಿಟಲ್ ಪ್ಯಾನಲ್‌ಗಳ ಮೂಲಕ ಅನಾವರಣಗೊಳಿಸುತ್ತದೆ ಎಂದರು. ಗಣಿತ ಒಂದು ಸಾರ್ವತ್ರಿಕ ಭಾಷೆಯಾಗಿದ್ದು, ಜಾಗತಿಕ ಒಳಿತಿಗಾಗಿ ಸೇವೆ ಸಲ್ಲಿಸುತ್ತಿದೆ ಎಂದು ಅಭಿಪ್ರಾಯಪಟ್ಟರು.

**<><><*><><<>**

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರ ಆಪ್ತ ಸಹಾಯಕ ಚಂದ್ರನಾಥ ರಥ್ ಅವರ ಹತ್ಯೆ ಪ್ರಕರಣದ ತನಿಖೆಯನ್ನು ಕೇಂದ್ರ ತನಿಖಾ ದಳ ಇಂದು ಅಧಿಕೃತವಾಗಿ ಕೈಗೆತ್ತಿಕೊಂಡಿದೆ. ರಾಜ್ಯ ಪೋಲಿಸರ ಶಿಫಾರಸ್ಸಿನ ಮೇರೆಗೆ ಕೇಂದ್ರ ತನಿಖಾ ಸಂಸ್ಥೆ ಈ ಕ್ರಮ ಕೈಗೊಂಡಿದ್ದು, ಪ್ರಕರಣದ ತನಿಖೆಗಾಗಿ ಕೊಲ್ಕೊತ್ತಾ ವಲಯದ ಜಂಟಿ ನಿರ್ದೇಶಕರ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡ ರಚಿಸಲಾಗುವುದು ಎಂದು ಸಿಬಿಐ ಪ್ರಕಟಣೆಯಲ್ಲಿ ತಿಳಿಸಿದೆ. ಈ ಬೆಳವಣಿಗೆಯ ಬೆನ್ನಲ್ಲೆ ರಾಜ್ಯ ಪೊಲೀಸರು ಪ್ರಕರಣದ ದಾಖಲೆಗಳನ್ನು ಸಿಬಿಐಗೆ ಹಸ್ತಾಂತರಿಸಲು ಸಿದ್ಧತೆ ನಡೆಸಿದ್ದಾರೆ. ತನಿಖಾ ತಂಡ ಇಂದು ಮಧ್ಯಮ ಗ್ರಾಮ ಪೊಲೀಸ್ ಠಾಣೆಗೆ ಭೇಟಿ ನೀಡುವ ಸಾಧ್ಯತೆಯಿದ್ದು, ಘಟನಾ ಸ್ಥಳವನ್ನು ಪರಿಶೀಲಿಸುವ ನಿರೀಕ್ಷೆಯಿದೆ.

**<>><><*><><<>**

ಇಂದು ಅಮಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡದ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ೩ ವಿಕೆಟ್‌ಗಳ ಜಯ ದಾಖಲಿಸಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ><><<>**